# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆಃ 715/2023

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಕರಿಪಾತಣ್ಣ | ಸಿಡಬ್ಲ್ಯೂ-4 |
| ತಂದೆಯ/ಗಂಡನ ಹೆಸರು | - | ನಿಂಗಪ್ಪ | ಪಿಡಬ್ಲ್ಯೂ-4 |
| ವಯಸ್ಸು | - | ಸು.35 ವರ್ಷ | ಪ್ರ.ವ.ಬೋ ದಿನಾಂಕಃ27.03.2025 |
| ಉದ್ಯೋಗ | - | ವ್ಯವಸಾಯ | |
| ವಾಸ | - | ಶಿವಗಂಗಾ ಗ್ರಾಮ | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ-**

1. ಚಾಸಾ-1 ರಿಂದ 3 ನನ್ನ ಸಂಬಂಧಿಕರು. ಆರೋಪಿತರೆಲ್ಲರೂ ನಮ್ಮ ಸಂಬಂಧಿಕರು.

2. ಆರೋಪಿತರು ನಮಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. 1 ನೇ ಆರೋಪಿ ಚಾಸಾ-1 ರವರಿಗೆ ಹಾರೆಕೋಲಿನಿಂದ ತಲೆಗೆ ಹೊಡೆದಿಲ್ಲ. 3 ನೇ ಆರೋಪಿತನು ಚಾಸಾ-2 ರವರ ಸೀರೆ ಹಿಡಿದು ಎಳೆದಾಡಿ, ಕೈ ಕಾಲುಗಳಿಂದ ಹೊಡೆದಿಲ್ಲ. 2 ರಿಂದ 8 ನೇ ಆರೋಪಿತರು ನನಗೆ ಮತ್ತು ಚಾಸಾ-3 ರವರಿಗೆ ಕೈ ಕಾಲುಗಳಿಂದ ಕೆಳಗೆ ಹಾಕಿ ತುಳಿದಿರುವುದಿಲ್ಲ. ಚಾಸಾ-5 ಮತ್ತು 6 ರವರು ಜಗಳವನ್ನು ಬಿಡಿಸಿರುವುದಿಲ್ಲ. ಆರೋಪಿತರು ನಮಗೆ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

3. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲುಗಳನ್ನು ನೋಡಿ ಗುರುತಿಸುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ–ಸವಾಲುಃ ಮಾನ್ಯ ಎಪಿಪಿಯವರಿಂದಃ–**

1. ದಿಃ11.02.2023 ರಂದು ರಾತ್ರಿ 8.30 ರ ಸಮಯದಲ್ಲಿ ನಾನು ಮತ್ತು ಚಾಸಾ–1 ಹಾಗೂ 2 ಮತ್ತು 3 ರವರು ನಮ್ಮ ಮನೆಯ ಹತ್ತಿರ ಇರುವಾಗ ಆರೋಪಿತರು ನಮಗೆ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. 1 ನೇ ಆರೋಪಿ ಚಾಸಾ–1 ರವರಿಗೆ ಹಾರೆಕೋಲಿನಿಂದ ತಲೆಗೆ ಹೊಡೆದನು ಎಂದರೆ ಸರಿಯಲ್ಲ. 3 ನೇ ಆರೋಪಿತನು ಚಾಸಾ–2 ರವರ ಸೀರೆ ಹಿಡಿದು ಎಳೆದಾಡಿ, ಕೈ ಕಾಲುಗಳಿಂದ ಹೊಡೆದನು ಎಂದರೆ ಸರಿಯಲ್ಲ. 2 ರಿಂದ 8 ನೇ ಆರೋಪಿತರು ನನಗೆ ಮತ್ತು ಚಾಸಾ–3 ರವರಿಗೆ ಕೈ ಕಾಲುಗಳಿಂದ ಕೆಳಗೆ ಹಾಕಿ ತುಳಿದರು ಎಂದರೆ ಸರಿಯಲ್ಲ. ಆರೋಪಿತರು ನಮಗೆ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಚಾಸಾ–5 ಮತ್ತು 6 ರವರು ಜಗಳವನ್ನು ಬಿಡಿಸಿದರು ಎಂದರೆ ಸರಿಯಲ್ಲ.

2. ಈ ಮೇಲೆ ಹೇಳಿದಂತೆ ದಿಃ14.02.2023 ರಂದು ಹೇಳಿಕೆ ನೀಡಿದ್ದರೂ, ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಹೇಳಿಕೆ ಭಾಗವನ್ನು **ನಿಪಿ–6** ಎಂದು ಗುರುತಿಸಲಾಯಿತು. ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ. ಆ ಕಾರಣದಿಂದ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ.ವೈ ಆರ್ ಕೆ ವಕೀಲರಿಂದಃ**

ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.